## ಕರ್ನಾಟಕ ಸರ್ಕಾರದ ನಡವಳಿ

ವಿಷಯ:- ಡಾ: ಭಾಷ್ಯಂಸ್ವಾಮಿ, ಪ್ರಾಂಶುಪಾಲರು, ಸರ್ಕಾರಿ ಮಹಾರಾಜ ಸಂಸ್ಕೃತ ಕಾಲೇಜು, ಮೈಸೂರು ಇವರಿಗೆ ಯುಜಿಸಿ ವೇತನ ನೀಡುವ ಬಗ್ಗೆ ಮತ್ತು ವಯೋನಿವೃತ್ತಿ ವಯಸ್ಸನ್ನು 60ರಿಂದ 62ಕ್ಕೆ ನಿಗದಿಪಡಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ಇಡಿ 21 ಯುಡಿವಿ 2011, ದಿನಾಂಕ 15-12-2012
2. ಸರ್ಕಾರಿ ಆದೇಶ ಸಂಖ್ಯೆ: ಇಡಿ 173 ಯುಆರ್‌ಸಿ 2010, ದಿನಾಂಕ 01-04-2011
3. ಸರ್ಕಾರಿ ಆದೇಶ ಸಂಖ್ಯೆ: ಇಡಿ 37 ಯುಎನ್‌ಇ 2009(ಭಾಗ), ದಿನಾಂಕ 15-10-2009

******

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ, ಜೇಷ್ಠತಾ ಪಟ್ಟಿಯಯಲ್ಲಿ ಹಿರಿಯರಾದ ಡಾ: ಭಾಷ್ಯಂಸ್ವಾಮಿ, ಸರ್ಕಾರಿ ಮಹಾರಾಜ ಸಂಸ್ಕೃತ ಕಾಲೇಜು, ಮೈಸೂರು ಇವರನ್ನು ಸರ್ಕಾರಿ ಮಹಾರಾಜ ಸಂಸ್ಕೃತ ಕಾಲೇಜು, ಮೈಸೂರು ಇಲ್ಲಿನ ಪ್ರಾಂಶುಪಾಲರ ಹುದ್ದೆಗೆ ಅಧಿಕ ಪ್ರಭಾರದಲ್ಲಿರಿಸಿ, ದಿನಾಂಕ 22-10-2008ರಿಂದ ಅನ್ವಯವಾಗುವಂತೆ ಖಾಯಂ ಪ್ರಾಂಶುಪಾಲರನ್ನಾಗಿ ನೇಮಿಸಲಾಗಿತ್ತು.

ಮೇಲೆ ಓದಲಾದ (2)ರ ದಿನಾಂಕ 01-04-2011ರ ಸರ್ಕಾರಿ ಆದೇಶದಲ್ಲಿ ಶ್ರೀ ಜಯಚಾಮರಾಜೇಂದ್ರ ಸಂಸ್ಕೃತ ಕಾಲೇಜು, ಬೆಂಗಳೂರು ಮತ್ತು ಸರ್ಕಾರಿ ಮಹಾರಾಜ ಸಂಸ್ಕೃತ ಕಾಲೇಜು, ಮೈಸೂರು ಈ ಎರಡೂ ಕಾಲೇಜುಗಳನ್ನು ಸಂಸ್ಕೃತ ವಿಶ್ವವಿದ್ಯಾಲಯದ ಘಟಕ ಕಾಲೇಜುಗಳೆಂದು ಪರಿಗಣಿಸಲಾಗಿದೆ.

ಮೇಲ ಓದಲಾದ (3)ರ ಸರ್ಕಾರಿ ಆದೇಶದಲ್ಲಿ ರಾಜ್ಯದ ವಿಶ್ವವಿದ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಯುಜಿಸಿ ವೇತನ ಪಡೆಯುತ್ತಿರುವ ಬೋಧಕ ಸಿಬ್ಬಂದಿಗಳ ವಯೋನಿವೃತ್ತಿಯ ವಯಸ್ಸನ್ನು 60ರಿಂ 62ಕ್ಕೆ ಹೆಚ್ಚಿಸಲಾಗಿದೆ.

ಮೇಲ್ಕಂಡ ಆದೇಶಗಳನ್ವಯ ಡಾ: ಭಾಷ್ಯಂಸ್ವಾಮಿ, ಪ್ರಾಂಶುಪಾಲರಾಗಿ ಸರ್ಕಾರಿ ಮಹಾರಾಜ ಸಂಸ್ಕೃತ ಕಾಲೇಜು, ಮೈಸೂರು ಇಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸದರಿಯವರು ಪಿಹೆಚ್‌ಡಿ ಪದವಿ ಪಡೆದಿರುವುದರಿಂದ, ಯುಜಿಸಿ ವೇತನವನ್ನು ವಿಸ್ತರಿಸಬೇಕಾಗುತ್ತದೆ. ಆದ್ದರಿಂದ, ಸದರಿಯವರಿಗೆ ಸಂಸ್ಕೃತ ವಿಶ್ವವಿದ್ಯಾಲಯದ ಬೋಧಕ ಸಿಬ್ಬಂದಿಗಳಿಗೆ ನೀಡುವ ಎಲ್ಲಾ ಸೇವಾ ಮತ್ತು ವೇತನ ಸವಲತ್ತುಗಳನ್ನು ನೀಡಬೇಕಾಗಿರುತ್ತದೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, ಅದರಂತೆ, ಈ ಕೆಳಕಂಡ ಆದೇಶ.

### ಸರ್ಕಾರಿ ಆದೇಶ ಸಂ. ಇಡಿ 132 ಯುಎನ್‌ಇ 2014, ದಿನಾಂಕ 31-01-2015

ಮೇಲೆ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಡಾ: ಭಾಷ್ಯಂಸ್ವಾಮಿ, ಪ್ರಾಂಶುಪಾಲರು, ಸರ್ಕಾರಿ ಮಹಾರಾಜ ಸಂಸ್ಕೃತ ಕಾಲೇಜು, ಮೈಸೂರು ಇವರಿಗೆ ಸರ್ಕಾರಿ ಆದೇಶ ಸಂಖ್ಯೆ: ಇಡಿ 37 ಯುಎನ್‌ಇ 2009, ದಿನಾಂಕ 24-12-2009ರಲ್ಲಿ ಪ್ರಾಂಶುಪಾಲರಿಗೆ ನಿಗದಿಪಡಿಸಿರುವ ವೇತನ ಶ್ರೇಣಿ ರೂ. 37400-67000+ಎಜಿಪಿ10000ಅನ್ನು ದಿನಾಂಕ 15-12-2012ರಿಂದ ನಿಗದಿಪಡಿಸಲಾಗಿದೆ ಮತ್ತು